## ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:-* ಸಾರ್ವಜನಿಕರ ಉದ್ದೇಶಕ್ಕಾಗಿ ಸರ್ಕಾರದ ಅನುದಾನವನ್ನು ಬಳಸಿಕೊಂಡು ಖಾಸಗಿ ನಿವೇಶನದಲ್ಲಿ ಕೊಳವೆ ಭಾವಿ ಕೊರೆದು, ಪಂಪ್ ಹೌಸ್ ನಿರ್ಮಾಣ ಮಾಡಿ ಕರ್ತವ್ಯ ಲೋಪವೆಸಗಿರುವ ಶ್ರೀ ಟಿ.ಎನ್.ಮಂಜಪ್ಪ, ಸಹಾಯಕ ಇಂಜಿನಿಯರ್-2, ಇವರ ವಿರುದ್ಧ ಇಲಾಖಾ ವಿಚಾರಣೆಗೆ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ- ಆದೇಶ.

*ಓದಲಾಗಿದೆ*

1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಅ.ಸ.ಪ.ಸಂಖ್ಯೆ:ಕಂಪ್ಲೇಟ್/ಉಪಲೋಕ್/ಬಿ.ಡಿ/5604/2013/ಎಆರ್ಎಲ್ಓ-2, ದಿನಾಂಕ:26.10.2016
2. ಮಾನ್ಯ ಉಪ ಲೋಕಾಯುಕ್ತರವರ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ವರದಿ ಸಂಖ್ಯೆ: ಕಂಪ್ಲೇಟ್/ಉಪಲೋಕ್/ಬಿ.ಡಿ/5604/2013/ ಎಆರ್ಎಲ್ಓ-2, ದಿನಾಂಕ:28.9.2016

*ಪ್ರಸ್ತಾವನೆ:-*

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ:26.10.2016ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪ ಲೋಕಾಯುಕ್ತರವರ ದಿನಾಂಕ:28.9.2016ರ ಲೋಕಾಯುಕ್ತ ಕಾಯ್ದೆಯ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿದ್ದು, ಶ್ರೀ ಎನ್.ವಿ.ಶ್ರೀಧರ್, ಕಾರ್ಯದರ್ಶಿ, ಶ್ರೀ ಚೌಡೇಶ್ವರ ದೇವಸ್ಥಾನ ಟ್ರಸ್ಟ್, ವೆಂಕಟಾಪುರ ಪಾವಗಡ ತಾಲ್ಲೂಕು ಇವರು ಲೋಕಾಯುಕ್ತ ಕಛೇರಿಗೆ ದೂರೊಂದನ್ನು ಸಲ್ಲಿಸಿ, ಪಾವಗಡ ತಾಲ್ಲೂಕು ವೆಂಕಟಾಪುರ ಗ್ರಾಮದ ಸರ್ವೇ ನಂ.150/1ಎ ರಲ್ಲಿ ಶ್ರೀ ಚೌಡೇಶ್ವರ ದೇವಸ್ಥಾನ ಟ್ರಸ್ಟ್ ಮಾಲಿಕತ್ವದಲ್ಲಿ 30 ಗುಂಟೆ ಜಮೀನು ಇರುತ್ತದೆಯೆಂದು, ಸದರಿ ಜಮೀನಿನಲ್ಲಿ ಟ್ರಸ್ಟ್‌ನ ಅಧ್ಯಕ್ಷರ ಅನುಮತಿ ಇಲ್ಲದೆ ಶ್ರೀ ಟಿ.ಎನ್.ಮಂಜಪ್ಪ, ಹಿಂದಿನ ಸಹಾಯಕ ಇಂಜಿನಿಯರ್-2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಪಾವಗಡ ಇವರು ಕೊಳವೆ ಬಾವಿ ಕೊರೆದು ಪಂಪ್ ಹೌಸ್ ನಿರ್ಮಾಣ ಮಾಡಿರುತ್ತಾರೆಂದು ಸದರಿಯವರ ವಿರುದ್ಧ ಕ್ರಮ ಕೈಗೊಂಡು ಕೊಳವೆ ಬಾವಿ ಮತ್ತು ಪಂಪ್ ಹೌಸ್ ಇವುಗಳನ್ನು ತೆರವುಗೊಳಿಸಬೇಕೆಂದು ಕೋರಿರುತ್ತಾರೆ.

ಲೋಕಾಯುಕ್ತ ಕಛೇರಿಯು ಸದರಿ ದೂರಿನ ಕುರಿತು ಕಲಂ 9ರನ್ವಯ ತನಿಖೆ ಕೈಗೊಂಡಿದ್ದು, ಅಪಾದಿತರಾದ ಶ್ರೀ ಟಿ.ಎನ್.ಮಂಜಪ್ಪ ಇವರಿಂದ ಹೇಳಿಕೆ ಪಡೆದು ಪರಿಶೀಲಿಸಿರುತ್ತದೆ. ಅಪಾದಿತರ ಹೇಳಿಕೆಯನುಸಾರ ಕೊಳವೆ ಬಾವಿ ಕೊರೆಯಿಸಿರುವ ಸ್ಥಳ ಹಾಗೂ ಪಂಪ್ ಹೌಸ್ ನಿರ್ಮಾಣ ಮಾಡಿರುವ ಸ್ಥಳವು ಸಾರ್ವಜನಿಕ ಆಸ್ತಿಯೇ ಅಥವಾ ಖಾಸಗಿ ಆಸ್ತಿಯೇ ಎಂಬುದನ್ನು ಖಚಿತಪಡಿಸಲು ಯಾವುದೇ ದಾಖಲೆಗಳನ್ನು ಅಪಾದಿತರು ಒದಗಿಸಿರುವುದಿಲ್ಲವೆಂದು, ಒಂದು ವೇಳೆ ಖಾಸಗಿ ಜಾಗದಲ್ಲಿ ಬೋರವೆಲ್ ಕೊರೆಸಲು ಹಾಗೂ ಪಂಪ್ ಹೌಸ್ ನಿರ್ಮಾಣ ಮಾಡಲು ಉದ್ದೇಶಿಸಿದಲ್ಲಿ ಸಂಬಂಧಿಸಿದ ವ್ಯಕ್ತಿಗಳ ಲಿಖಿತ ಪೂರ್ವಾನುಮತಿ ಅನುಮತಿ ಪಡೆಯಬೇಕಾಗಿದ್ದು, ಅಪಾಧಿತರು ಲಿಖಿತ ಅನುಮತಿ ಪಡೆದಿರುವುದಿಲ್ಲವೆಂದು. ಕೊಳವೆ ಬಾವಿ ಕೊರೆಯಿಸಿದ ಜಾಗವು ಟ್ರಸ್ಟ್‌ಗೆ ಸಂಬಂಧಿಸಿಲ್ಲವೆಂಬ ಬಗ್ಗೆ ಅಪಾದಿತರು ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲವೆಂದು ಅಲ್ಲದೆ, ಅಪಾದಿತರು ಹಾಜರು ಪಡಿಸಿದ 2 ಪೋಟಗಳನ್ನು ಗಮನಿಸಿದಾಗ ದೇವಸ್ಥಾನದ ಹತ್ತಿರವೇ ಪಂಪ್ ಹೌಸ್ ನಿರ್ಮಿಸಿರುವುದು ಕಂಡು ಬರುತ್ತದೆಯೆಂದು ವರದಿಯಲ್ಲಿ ತಿಳಿಸಲಾಗಿದೆ.

---2

ಅಪಾದಿತರು ನೀಡಿರುವ ಹೇಳಿಕೆಯು ಮೇಲಿನ ಕಾರಣಗಳಿಂದ ಸೂಕ್ತ ಹಾಗೂ ಸಮಾಧಾನಕಾರವಾಗಿರುವುದಿಲ್ಲವೆಂದು, ಅಪಾದಿತರು ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪಾಲನೆಯಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಠೆ, ಪ್ರಾಮಾಣಿಕತೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆಯೆಂದು, ಅಪಾದಿತರು ಕ.ನಾ.ಸೇ (ನಡತೆ) ನಿಯಮಗಳು 1966 ರ ನಿಯಮ 3(1) ರಡಿ ದುರ್ನಡತೆ ಎಸಗಿರುವುದು ಕಂಡು ಬರುವುದರಿಂದ ಅವರ ವಿರುದ್ಧ ವಿವರವಾದ ಇಲಾಖೆ ವಿಚಾರಣೆ ಕೈಗೊಳ್ಳಲು ಪ್ರಕರಣವನ್ನು ನಮ್ಮ ಸಂಸ್ಥೆಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತರು ಸರ್ಕಾರವನ್ನು ಕೋರಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಅಪಾದಿತರಾದ ಶ್ರೀ ಟಿ.ಎನ್.ಮಂಜಪ್ಪ, ಸಹಾಯಕ ಇಂಜಿನಿಯರ್-2, ಇವರು ಸರ್ಕಾರದ ಅನುದಾನದಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ, ಖಾಸಗಿ ಟ್ರಸ್ಟ್‌ನ ಅನುಮತಿ ಇಲ್ಲದೆ ಟ್ರಸ್ಟ್‌ನ ನಿವೇಶನದಲ್ಲಿ ಕೊಳವೆ ಭಾವಿ ಕೊರೆಯಿಸಿ, ಪಂಪ್ ಹೌಸ್ ನಿರ್ಮಾಣ ಮಾಡಿರುವುದು ಕಂಡು ಬರುತ್ತದೆ. ಯಾವುದೇ ಖಾಸಗಿ ಜಮೀನಿನಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಕಾಮಗಾರಿಗಳನ್ನು ಕೈಗೊಳ್ಳಬೇಕಾದಲ್ಲಿ ನಿಯಮಾನುಸಾರ ಸದರಿ ಜಮೀನನ್ನು ಸಂಬಂಧಿಸಿದ ಗ್ರಾಮ ಪಂಚಾಯತ್‌ನ ಸುಪರ್ದಿಗೆ ಪಡೆದು ನಂತರ ಸದರಿ ಜಾಗದಲ್ಲಿ ಕಾಮಗಾರಿಯನ್ನು ಕೈಗೊಳ್ಳುವುದು ಸರಿಯಾದ ಕ್ರಮವಾಗಿರುತ್ತದೆ. ಅದರೆ ಅಪಾದಿತರು ಈ ದಿಸೆಯಲ್ಲಿ ಕಾರ್ಯನಿರ್ವಹಿಸದೇ, ಸರ್ಕಾರದ ಅನುದಾನವನ್ನು ಖಾಸಗಿ ಜಾಗದಲ್ಲಿ ಬಳಸಿ, ಸರ್ಕಾರದ ಹಣ ನಿಷ್ಫಲವಾಗಲು ಅವಕಾಶ ಮಾಡಿಕೊಟ್ಟಿರುವುದು ಕಂಡು ಬರುತ್ತದೆ. ಅಪಾದಿತರು ಸರ್ಕಾರಿ ನೌಕರರಾಗಿದ್ದು ತಮ್ಮ ಕಾರ್ಯನಿರ್ವಹಣೆಯಲ್ಲಿ ವಿಫಲಾಗಿರುವುದು ಹಾಗೂ ಕ.ನಾ.ಸೇ (ನಡತೆ) ನಿಯಮಗಳು 1966 ರ ನಿಯಮ 3(1) ರಡಿ ದುರ್ನಡತೆ ಎಸಗಿ, ಶಿಸ್ತುಕ್ರಮಕ್ಕೆ ಅರ್ಹರಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ. ಈ ಕಾರಣದಿಂದ ಪ್ರಕರಣದ ಕುರಿತು ವಿವರವಾದ ಇಲಾಖಾ ವಿಚಾರಣೆಯನ್ನು ಮಾನ್ಯ ಉಪಲೋಕಾಯುಕ್ತರಿಂದ ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

**ಆದೇಶ ಸಂಖ್ಯೆ:ಗ್ರಾಅಪ 136 ಇಎನ್‌ಕ್ಯೂ 16, ಬೆಂಗಳೂರು, ದಿನಾಂಕ:29.11.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಟಿ.ಎನ್.ಮಂಜಪ್ಪ, ಹಿಂದಿನ ಸಹಾಯಕ ಇಂಜಿನಿಯರ್-2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಪಾವಗಡ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕ.ನಾ.ಸೇ (ವ.ನಿ.ಮೇ) ನಿಯಮಗಳು 1957 ರ ನಿಯಮ 11 ರ ಅನುಸಾರ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14-ಎ ರನ್ವಯ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಿದ್ದೇಶ ಪೊತ್ತುಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

29/11/16

**ಇವರಿಗೆ:**

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.

4. ಮುಖ್ಯ ಇಂಜಿನಿಯರ್, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
8. ಶ್ರೀ ಟಿ.ಎನ್.ಮಂಜಪ್ಪ, ಸಹಾಯಕ ಇಂಜಿನಿಯರ್-2, ಲೋಕೋಪಯೋಗಿ ಇಲಾಖೆ ಉಪವಿಭಾಗ, ಮಧುಗಿರಿ.
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಜಂಟಿ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
11. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.